ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: 15

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 16/2/21

ವೀರಶೈವ ಲಿಂಗಾಯತ ಎಲ್ಲ ಪಂಗಡ ಒಬಿಸಿಗೆ ಸೇರಿಸಿ: ಶ್ರೀ

18, 19ರಂದು ವಿವಿಧ ಸ್ವಾಮೀಜಿಗಳ ನೇತೃತ್ವದಲ್ಲಿ ಸಿಎಂ ಬಳಿ ನಿಯೋಗ

ಹರಪನಹಳ್ಳಿ: ವೀರಶೈವ ಲಿಂಗಾಯತ ಸಮುದಾಯದ ಎಲ್ಲ ಉಪಜಾತಿಗಳನ್ನು ಹಿಂದುಳಿದ ವರ್ಗ (ಒಬಿಸಿ) ಪಟ್ಟಿಗೆ ಸೇರಿಸಬೇಕೆಂದು ಈಗಾಗಲೇ ಮುಖ್ಯಮಂತ್ರಿಗಳಿಗೆ ಮನವಿ ನೀಡಿ ಒತ್ತಾಯಿಸಲಾಗಿದ್ದು, ಫೆ.18 ಮತ್ತು 19ರಂದು ವಿವಿಧ ಸ್ವಾಮೀಜಿಗಳ ನೇತೃತ್ವದ ನಿಯೋಗ ಸಿಎಂ ಬಳಿ ತೆರಳಲಿದೆ ಎಂದು ಉಜ್ಜಯಿನಿ ಪೀಠಾಧ್ಯಕ್ಷ ಜಗದ್ಗುರು ಸಿದ್ದಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಪಟ್ಟಣದ ನಟರಾಜಕಲಾ ಭವನ ಬಡಾವಣೆಯಲ್ಲಿ ಸೋಮವಾರ ಶ್ರೀವರಸಿದ್ಧಿ ವಿನಾಯಕ ಮೂರ್ತಿ ಪ್ರತಿಷ್ಠಾಪನಾ ಹಾಗೂ ಆಷ್ಟಬಂಧ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ ನಂತರ ಸುದ್ದಿಗಾರರೊಂದಿಗೆಮಾತನಾಡಿ, ಆಂಧ್ರಪ್ರದೇಶ, ಮಹಾರಾಷ್ಟ್ರ ಗೋವಾದಲ್ಲಿ ಒಳಪಂಡಗಳ ಜಾತಿ ಆಧಾರಿತ ಮೀಸಲಾತಿ ಇಲ್ಲ. ಒಟ್ಟಾರೆ ವೀರಶೈವ ಲಿಂಗಾಯತರನ್ನು ಒಬಿಸಿಗೆ ಸೇರಿಸಲಾಗಿದೆ. ಹೀಗಾಗಿ ರಾಜ್ಯದಲ್ಲೂ ಕೂಡ ಎಲ್ಲ ಲಿಂಗಾಯತರನ್ನು ಒಬಿಸಿ ಪಟ್ಟಿಗೆ ಸೇರಿಸಬೇಕು ಎಂಬುದು ನಮ್ಮ ಆಗ್ರಹ. ಕಳೆದ ವರ್ಷ ಫೆ.16ರಂದು ಕಾಶಿ ಪೀಠಕ್ಕೆ ಪ್ರಧಾನಿ ಮೋದಿ ಆಗಮಿಸಿದಾಗ ವೀರಶೈವ ಲಿಂಗಾಯತರನ್ನು ಒಬಿಸಿ ಪಟ್ಟಿಗೆ ಸೇರಿಸಬೇಕೆಂದು ಮನವಿ ಪತ್ರ ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಆದರೆ ಅಲ್ಲಿ ಸಿಎಂ ಯಡಿಯೂರಪ್ಪ ಅವರು ನೇರವಾಗಿ ಪ್ರಧಾನಿಗೆ ಮನವಿ ಕೊಡಬಾರದು, ರಾಜ್ಯ ಸರ್ಕಾರಕ್ಕೆ ಕೊಡಬೇಕು ಎಂಬ ಸಲಹೆ ನೀಡಿದ ಹಿನ್ನೆಲೆಯಲ್ಲಿ ಮನವಿ ಕೊಡಲಿಲ್ಲ ಎಂದರು.

ಪಂಚಮಸಾಲಿ ಹೋರಾಟಕ್ಕೆ ಬೆಂಬಲ: ಪಂಚಮಸಾಲಿ ಸಮಾಜದ ಹೋರಾಟದ ವಿರುದ್ಧವಾಗಿ ನಾವು ಮೀಸಲಾತಿ ಕೇಳುತ್ತಿಲ್ಲ. ಪಂಚಮಸಾಲಿ ಸಮಾಜದ ಪಾದಯಾತ್ರೆಗೆ ಉಜ್ಜಯಿನಿ ಪೀಠದ ಅನೇಕ ಶಾಖಾ ಮಠಾಧಿಶರನ್ನು ಕಳುಹಿಸಿ ಕೊಟ್ಟಿದ್ದೇವೆ. ಆ ಸಮಾಜಕ್ಕೆ ಶುಭ ಹಾರೈಸಿದ್ದು ಅವರ ಹೋರಾಟಕ್ಕೆ ನಮ್ಮ ಬೆಂಬಲವಿದೆ. ಜತೆಗೆ ಒಳಪಂಗಡದಲ್ಲಿರುವ ನೂರಾರು ಉಪಜಾತಿಯವರಿಗೂ ಒಳ್ಳೆಯದಾಗಲಿ ಎಂದು ಬಯಸುತ್ತಿದ್ದೇವೆ.

ವೀರಶೈವ ಸಮುದಾಯದ 102 ಒಳಪಂಗಡಗಳಲ್ಲಿ ಕೇವಲ 30 ಒಳಪಂಗಡಗಳಿಗೆ ಮಾತ್ರ ಮೀಸಲಾತಿ ಸೌಲಭ್ಯ

ದೊರಕುತ್ತಿದೆ. ಉಳಿದ 72 ಪಂಗಡಗಳಿಗೆ ಸೌಲಭ್ಯ ಸಿಗುತ್ತಿಲ್ಲ. ಹೀಗಾಗಿ ಪಂಚಮಸಾಲಿ ಸಮಾಜದವರು 2ಎ ಕೇಳುತ್ತಿದ್ದಾರೆ. ಅವರಿಗೆ ಸಿಕ್ಕರೆ ತುಂಬಾ ಸಂತೋಷ.

• ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಸ್ವಾ., ಉಜ್ಜಯಿನಿ ಪೀಠ



ಕೆಲವೊಂಗಲ್ಲಿಪ್ರವೇಶಿಸಿದ ಹೋರಾಟ

ರಾಜಕೀಯ ಪ್ರೇರಿತ ಮೀಸಲಾತಿ ಒಳ್ಳೆಯದಲ್ಲ

ಬೆಂಗಳೂರು: ರಾಜ್ಯದಲ್ಲಿ ರಾಜಕೀಯ ಪ್ರೇರಿತ ಮೀಸಲಾತಿಗಳು ಹಾಗೂ ಎಲ್ಲರಿಗೂ ಮೀಸಲಾತಿ ಬೇಕು ಎನ್ನುವುದು ಯಾವುದೇ ಸಮಾಜಕ್ಕೆ ಒಳ್ಳೆಯದಲ್ಲ ಎಂದು ಕೇಂದ್ರ ಸಚಿವ ಸದಾನಂದಗೌಡ ಅಭಿಪ್ರಾಯಪಟ್ಟಿದ್ದಾರೆ.



ಬಿಬಿವಿಪಿಯ ಕೇಂದ್ರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ರಾಜಕೀಯ ಪ್ರೇರಿತ ಮೀಸಲಾತಿ ಹೋರಾಟಗಳಿಂದ ಸಮಾಜಕ್ಕೆ ಹಾಗೂ ಆಡಳಿತಕ್ಕೆ ತೊಂದರೆ ಉಂಟು ಮಾಡುವ ಕೆಲಸ ಮಾತ್ರ ಆಗುತ್ತಿದೆ. ಕೇಂದ್ರ ಸರ್ಕಾರ ಈ ಸಮಸ್ಯೆಯನ್ನು ತಾರ್ಕಿಕ ಅಂತ್ಯಕ್ಕೆ ಹೊಗೆದುಕೊಂಡು ಹೋಗುವಲ್ಲಿ ಕೆಲಸ ಮಾಡುತ್ತಿದೆ. ಈಗಾಗಲೇ ಆರ್ಥಿಕವಾಗಿ ಹಿಂದುಳಿದಿರುವವರಿಗೆ ಶೇ.10 ಪ್ರತಿಶತ ಮೀಸಲಾತಿ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಮುಂದಿನ ದಿನಗಳಲ್ಲಿ ಆರ್ಥಿಕವಾಗಿ ಯಾರು ಹಿಂದುಳಿದಿದ್ದಾರೆ, ಅವರಿಗೆ ಮೀಸಲಾತಿ ನೀಡುವ ಕೆಲಸ ಆಗಬೇಕು. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕಾರ್ಯಪ್ರವೃತ್ತವಾಗಿದೆ ಎಂದು ಹೇಳಿದರು.

ಅನ್ಯಭಾಗ್ಯ ಯೋಜನೆ ಬದಲಾವಣೆಗೆ ವಿರೋಧ ಪಕ್ಷದ ವಿದ್ಯೋಧಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಕರ್ನಾಟಕದಲ್ಲಿ ವಿರೋಧ ಪಕ್ಷ ಇದೆಯೇ ಎಂದು ಪ್ರಶ್ನೆ ಮಾಡಿದರು. ಕಾಂಗ್ರೆಸ್‌ನಲ್ಲೇ ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷ ಇದೆ. ಅರ್ಹತೆ ಇರುವವರಿಗೆ ಬಿಪಿಎಲ್ ಕಾರ್ಡ್ ಸೌಲಭ್ಯ ನೀಡಬೇಕು ಎನ್ನುವುದು ಸರಿ ಇದೆ. ಆದರೆ, ಇದರ ಮಾನದಂಡಗಳ ಬಗ್ಗೆ ಮತ್ತಷ್ಟು ವಿಸ್ತೃತವಾದ ಚರ್ಚೆ ಆಗಬೇಕಿದೆ ಎಂದು ಹೇಳಿದರು.

ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಸ್ವಾಮಿಗೆ ಸಿದ್ಧ: ದಿಂಡೂರ

ಪಂಚಮಸಾಲಿ ಮೀಸಲು ಹೋರಾಟ ಸಮಿತಿ ಸಂಚಾಲಕ ವಿಜಯಾನಂದ ಕಾಶಪ್ಪನವರ ಮಾತನಾಡಿ, ಪಂಚಮಸಾಲಿ ಸಮಾಜದ ಪಾದಯಾತ್ರೆಗೆ ಸಿಗುತ್ತಿರುವ ಜನಸ್ಪಂದನೆ ಹಾಗೂ ಸಮಾಜದ ಒಗ್ಗಟ್ಟು ಕಂಡು ಸಂವಿಧಾನಬದ್ಧವಾಗಿ ಮೀಸಲಾತಿ ಸಿಗಬೇಕು ಎನ್ನುವ ಕುರಿತು ಹಕ್ಕೊತ್ತಾಯ ಮಾಡುವುದು, ಹೋರಾಟ ಮಾಡುವುದರಲ್ಲಿ ತಪ್ಪಿಲ್ಲ. ಅದನ್ನು ನೀಡುವಂತಹದ್ದು ಸರ್ಕಾರದ ಕೆಲಸ ಎಂದು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.